## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೃಷಿ ಭಾಗ್ಯ ಯೋಜನೆಯಡಿ ಕೃಷಿಹೊಂಡ ನಿರ್ಮಾಣಕ್ಕಾಗಿ ಜೆ.ಸಿ.ಬಿ. ಮಾಲೀಕರಿಗೆ ನೇರವಾಗಿ ಸಹಾಯಧನವನ್ನು ಪಾವತಿಸುವ ಬಗ್ಗೆ.

**ಉಲ್ಲೇಖ:** 1) ಸರ್ಕಾರದ ಆದೇಶ ಸಂ: ಕೃಇ 08 ಕೃಯೋಕಾ 2014, ಬೆಂಗಳೂರು, ದಿನಾಂಕ: 22-07-2014

2) ಕೃಷಿ ನಿರ್ದೇಶಕರ ಪತ್ರ ಸಂಖ್ಯೆ: ಉಕೃನಿ(ಕೃಭಾ)/ಸ.ಪ/2015-16, ದಿ:18-09-2015

3) ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ದಿನಾಂಕ: 30-09-2015 ರಂದು ನಡೆದ ಕೃಷಿ ಭಾಗ್ಯ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ನಡವಳಿಗಳು.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮಳೆಯಾಶ್ರಿತ ಕೃಷಿಯನ್ನು ಸುಧಾರಿಸುವ ನಿಟ್ಟಿನಲ್ಲಿ ಕೃಷಿ ಭಾಗ್ಯ ಯೋಜನೆಯನ್ನು 2014-15 ನೇ ಸಾಲಿನಿಂದ ಅನುಷ್ಠಾನಗೊಳಿಸಲು ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ (2) ರ ಕೃಷಿ ನಿರ್ದೇಶಕರ ಪ್ರಸ್ತಾವನೆಯಲ್ಲಿ, ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ದಿನಾಂಕ: 19-08-2015 ರಂದು ನಡೆದ ಸಮನ್ವಯ ಸಮಿತಿ ಸಭೆಯಲ್ಲಿ ಚರ್ಚಿಸಿದಂತೆ, ಕೃಷಿ ಹೊಂಡ ನಿರ್ಮಾಣ ಕಾರ್ಯಕೈಗೊಳ್ಳಲು ಜೆ.ಸಿ.ಬಿ. ಮಾಲೀಕರಿಗೆ ನೇರವಾಗಿ ಸಹಾಯಧನ ಪಾವತಿಸುವುದರಿಂದ, ಯೋಜನೆಯ ಪ್ರಗತಿಯನ್ನು ತ್ವರಿತವಾಗಿ ಮಾಡಲು, ಕೃಷಿ ಹೊಂಡ ನಿರ್ಮಾಣವನ್ನು ಸಂಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ನಿರ್ಮಾಣ ಮಾಡಿರುವ ಬಗ್ಗೆ ಸ್ಥಳಿಯ ಇಲಾಖಾ ಅಧಿಕಾರಿಗಳು CMR ದೃಢೀಕರಿಸುವುದು ಹಾಗೂ ಸಂಬಂಧಪಟ್ಟ ರೈತರಿಂದ ಒಪ್ಪಿಗೆ ಪತ್ರ ಪಡೆದು ಜೆ.ಸಿ.ಬಿ. ಮಾಲೀಕರಿಗೆ ನೇರವಾಗಿ ಸಹಾಯಧನ ಪಾವತಿಸುವ ಬಗ್ಗೆ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ (3)ರಲ್ಲಿ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ದಿನಾಂಕ: 30-09-2015 ರಂದು ನಡೆದ ಕೃಷಿ ಭಾಗ್ಯ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ನಡವಳಿಯಲ್ಲಿ ಕೃಷಿ ಹೊಂಡ ನಿರ್ಮಾಣ ಕೈಗೊಳ್ಳಲು ಗರಿಷ್ಠ ಸಹಾಯಧನದ ಮೊತ್ತ ರೂ.1.00 ಲಕ್ಷಕ್ಕಿಂತ ಕಡಿಮೆ ಇರುವುದರಿಂದ, ಕೃಷಿ ಹೊಂಡ ನಿರ್ಮಾಣವನ್ನು ಸಂಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ನಿರ್ಮಾಣ ಮಾಡಿರುವ ಬಗ್ಗೆ ಸ್ಥಳೀಯ ಇಲಾಖಾ ಅಧಿಕಾರಿಗಳು CMR ದೃಢೀಕರಿಸುವುದು ಹಾಗೂ ಸಂಬಂಧಪಟ್ಟ ರೈತರ ಕೋರಿಕೆ ಪ್ರಕಾರ ಜೆ.ಸಿ.ಬಿ. ಮಾಲೀಕರಿಗೆ ಸಹಾಯಧನ ಪಾವತಿಸಲು ಆದೇಶ ಹೊರಡಿಸಲು ತೀರ್ಮಾನಿಸಲಾಗಿದೆ.

ಪ್ರಸ್ತಾವನೆಯನ್ನು ಕೂಲಂಕುಶವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 221 ಕೃಯೋಕಾ 2015, ಬೆಂಗಳೂರು ದಿನಾಂಕ :10-12-2015**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನಲೆಯಲ್ಲಿ, ಕೃಷಿ ಭಾಗ್ಯ ಯೋಜನೆಯಡಿಯಲ್ಲಿ ಕೃಷಿ ಹೊಂಡ ನಿರ್ಮಾಣ ಕೈಗೊಳ್ಳಲು ಗರಿಷ್ಠ ಸಹಾಯಧನದ ಮೊತ್ತ ರೂ.1.00 ಲಕ್ಷಕ್ಕಿಂತ ಕಡಿಮೆ ಇರುವುದರಿಂದ, ಕೃಷಿ ಹೊಂಡ ನಿರ್ಮಾಣವನ್ನು ಸಂಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ನಿರ್ಮಾಣ

ಮಾಡಿರುವ ಬಗ್ಗೆ ಸ್ಥಳೀಯ ಇಲಾಖಾ ಅಧಿಕಾರಿಗಳು ಅಳತೆ ತಪಾಸಣೆ (CMR) ದೃಢೀಕರಿಸುವುದು ಹಾಗೂ ಸಂಬಂಧಪಟ್ಟ ರೈತರ ಕೋರಿಕೆ ಪ್ರಕಾರ ಜೆ.ಸಿ.ಬಿ. ಮಾಲೀಕರಿಗೆ ಸಹಾಯಧನ ಪಾವತಿಸಲು ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

ಆರ್. ಎಸ್. ಶಿವಕುಮಾರ್
(ಆರ್ ಎಸ್.ಶಿವಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ(ಯೋಜನೆ).

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ & ಸಾಮಾಜಿಕ ಘಟಕಗಳ ಲೆಕ್ಕಪರಿಶೋಧನೆ ಇತ್ಯಾದಿ) ಕರ್ನಾಟಕ, ಹೊಸ ಕಟ್ಟಡ, ಪಿ.ಬಿ. ನಂ. 5398, ಬೆಂಗಳೂರು -01.
2) ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ ಮತ್ತು ಹಕ್ಕುದಾರಿ) ಕರ್ನಾಟಕ, ಹೊಸ ಕಟ್ಟಡ, ಪಿ.ಬಿ. ನಂ. 5398, ಬೆಂಗಳೂರು -01.
3) ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು-01
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಹಕಾರ ಇಲಾಖೆ
7) ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ
8) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
9) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ
10) ಆಯುಕ್ತರು / ನಿರ್ದೇಶಕರು ಕೃಷಿ ಇಲಾಖೆ.
11) ಆಯುಕ್ತರು / ನಿರ್ದೇಶಕರು ಜಲಾನಯನ ಅಭಿವೃದ್ಧಿ ಇಲಾಖೆ
12) ಆಯುಕ್ತರು / ನಿರ್ದೇಶಕರು, ರೇಷ್ಮೆ ಇಲಾಖೆ
13) ನಿರ್ದೇಶಕರು, ತೋಟಗಾರಿಕೆ ಇಲಾಖೆ
14) ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರಿಗೆ ಕೃಷಿ ನಿರ್ದೇಶಕರ ಮೂಲಕ
15) ನಿರ್ದೇಶಕರು ಖಜಾನೆ ಇಲಾಖೆ, ಬೆಂಗಳೂರು
16) ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
17) ಸರ್ಕಾರದ ಉಪಕಾರ್ಯದರ್ಶಿ, ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ
18) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4) ವಿಧಾನಸೌಧ, ಬೆಂಗಳೂರು
19) ಸರ್ಕಾರದ ಜಂಟಿ ಕಾರ್ಯದರ್ಶಿ, ಕೃಷಿ ಇಲಾಖೆ ಇವರ ಆಪ್ತ ಸಹಾಯಕರು
20) ಸರ್ಕಾರದ ಉಪಕಾರ್ಯದರ್ಶಿ-2, ಕೃಷಿ ಇಲಾಖೆ ಇವರ ಆಪ್ತ ಸಹಾಯಕರು.]
21) ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿಗಳು